239

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆ ನೀಡುವ ಕುರಿತು

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ನಅಇ 93 ಬೆಂರೂಪ್ರಾ 08, ದಿ: 11-03-08
2) ಶಿಕಾರಿಪುರ ಪುರಸಭೆ ಕಾರ್ಯಾಲಯದ ಪತ್ರ ಸಂಖ್ಯೆ: ಪುರಸಭೆ/ ಶಿಕಾರಿಪುರ/ಯೋ.ಪ್ರಾ/ ಮ.ಯೋ./1/09-10, ದಿ: 02-07-09
3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಇವರ ಏಕ ಕಡತ ಸಂಖ್ಯೆ: ನಗ್ರಾಯೋ(14)/ಶಿಕಾರಿಪುರ.ಮ.ಯೋ.ಅಂ./120/2009, ದಿ:11-09-09

423
31/10/09

* * * * * *

**ಪ್ರಸ್ತಾವನೆ:-**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಶಿಕಾರಿಪುರ ಕಾರ್ಯಾಲಯವು ಶಿಕಾರಿಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ಇಲಾಖೆ ಮುಖಾಂತರ ಸಲ್ಲಿಸಲಾಗಿದೆ.

ಮೇಲೆ (3) ರಲ್ಲಿ ಓದಲಾದ ಕಡತದಲ್ಲಿ ನಗರ ಯೋಜನಾ ನಿರ್ದೇಶಕರು ಶಿಕಾರಿಪುರ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 60000 ಗಳೀಗೆ ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾಯೋಜನೆಯನ್ನು ತಯಾರಿಸಲಾಗಿದೆ. ಶಿಕಾರಿಪುರ ಸ್ಥಳೀಯ ಯೋಜನಾ ಪ್ರದೇಶದ 1912 ಹೆಕ್ಟೇರ್ ಪ್ರದೇಶದಲ್ಲಿ 570.70 ಹೆಕ್ಟೇರ್‌ಗಳನ್ನು ಅಭಿವೃದ್ಧಿಗಾಗಿ ಬೇಕಾಗುವ ಪ್ರದೇಶವೆಂದು ತೀರ್ಮಾನಿಸಿ, ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಾಗಿ ಪ್ರಸ್ತಾಪಿಸಿರುವ ಒಟ್ಟು 570.70 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 269.00 ಹೆಕ್ಟೇರ್ (ಶೇ.47.14), ವಾಣಿಜ್ಯಕ್ಕಾಗಿ 36.90 ಹೆಕ್ಟೇರ್ (ಶೇ.6.47), ಕೈಗಾರಿಕೆಗಾಗಿ 33.63 ಹೆಕ್ಟೇರ್ (ಶೇ.5.88), ಸಾರ್ವಜನಿಕ:ಅರೆ ಸಾರ್ವಜನಿಕ ಉಪಯೋಗಕ್ಕಾಗಿ 41.00 ಹೆಕ್ಟೇರ್ (ಶೇ.7.18), ಸಾರ್ವಜನಿಕ ಉಪಯುಕ್ತತೆಗಾಗಿ 10.03 ಹೆಕ್ಟೇರ್ (ಶೇ.1.75), ಉದ್ಯಾನವನ ಮತ್ತು ಬಯಲು ಜಾಗಗಳಿಗೆ 47.30 ಹೆಕ್ಟೇರ್ (ಶೇ.8.30), ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 132.84 ಹೆಕ್ಟೇರ್ (ಶೇ.23.28) ಪ್ರದೇಶವನ್ನು ನಿಗದಿಪಡಿಸಿ, ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ – 1961 ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

31/10

**ಸರ್ಕಾರದ ಆದೇಶ ಸಂಖ್ಯೆ: ನಅಇ 274 ಬೆಂರೂಪ್ರಾ 2009,**
**ಬೆಂಗಳೂರು, ದಿನಾಂಕ: 26-10-2009**

31/10

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆ, ಶಿಕಾರಿಪುರ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಈ ಕೆಳಕಂಡ ಷರತ್ತಿಗೊಳಪಟ್ಟು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

238

"ಮಹಾಯೋಜನೆ (ಅಂತಿಮ) ದಲ್ಲಿ ಭದ್ರಾಪುರ ಗ್ರಾಮದ ಸ.ನಂ. 145 ಹಾಗೂ ಹಲಿಯೂರು ಗ್ರಾಮದ ಸ.ನಂ.199 ರ ಕೆರೆಗಳ ಮೇಲೆ ಹಾದುಹೋಗಿರುವ ವರ್ತುಲ ರಸ್ತೆಯ ಪಂಕ್ತೀಕರಣವನ್ನು ಕೆರೆಯ ಮೇಲೆ ಹಾದುಹೋಗದಂತೆ ಸೂಕ್ತವಾಗಿ ಬದಲಿಸತಕ್ಕದ್ದು"

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಪ್ರತಿಯನ್ನು:

(1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು
(2) ಮುಖ್ಯಾಧಿಕಾರಿಗಳು, ಪುರಸಭೆ ಕಾರ್ಯಾಲಯ, ಶಿಕಾರಿಪುರ
(3) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಶಿವಮೊಗ್ಗ
(4) ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
(5) ಕರ್ನಾಟಕ ರಾಜ್ಯ ಪತ್ರ
(6) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು